# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಬಿ. ಸಿ. ವಸಂತಕುಮಾರ್, ಕಾರ್ಯನಿರ್ವಾಹಕ ಅಧಿಕಾರಿ. ತಾಲ್ಲೂಕು ಪಂಚಾಯತಿ, ಚಿಂತಾಮಣಿ, ಚಿಕ್ಕಬಳ್ಳಾಪುರ ಜಿಲ್ಲೆ, ಇವರನ್ನು ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ.

ಓದಲಾಗಿದೆ: 1.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ: ಜಿಪಂಚಿ/ಆಡಳಿತ/ಗ್ರಾಪಂಕ /ಸಿಆರ್/2013-14 ದಿನಾಂಕ: 23-12-2013

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರ ಪತ್ರ ಸಂಖ್ಯೆ: ಜಿಪಂಚಿ/ಮುಕಾನಿಅ/ಆಶಾ /2014-15 ದಿನಾಂಕ: 20-05-2014

3. ಚಿಂತಾಮಣಿ ತಾಲ್ಲೂಕು ಗ್ರಾಮ ಪಂಚಾಯತಿ ನೌಕರರು ಸಲ್ಲಿಸಿರುವ ಮನವಿ ದಿನಾಂಕ: 12-06-2014.

## ಪ್ರಸ್ತಾವನೆ:

ಶ್ರೀ ಬಿ. ಸಿ. ವಸಂತಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ, ಇವರು ನಿಯೋಜನೆ ಮೇಲೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ತಾಲ್ಲೂಕು ಪಂಚಾಯತಿ, ಚಿಂತಾಮಣಿ, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಇವರ ವಿರುದ್ಧ ಹಲವಾರು ದೂರುಗಳು, ಕರ್ತವ್ಯಲೋಪ, ಬೇಜವಾಬ್ದಾರಿತನ ಹಾಗೂ ಮೇಲಾಧಿಕಾರಿಗಳ-ಸೂಚನೆ ಪಾಲಿಸದಿರುವುದು ಇತ್ಯಾದಿ ಆರೋಪಗಳ ಮೇಲೆ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರ ಪತ್ರಗಳಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಇದಲ್ಲದೆ, ಶ್ರೀ ಬಿ. ಸಿ. ವಸಂತಕುಮಾರ್, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಾಗರ ಮತ್ತು ಹೊಸನಗರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಮತ್ತೊಂದು ಪ್ರಕರಣದಲ್ಲಿ ಪಶುವೈದ್ಯ ಆಸ್ಪತ್ರೆ ತುಮರಿ ಕಟ್ಟಡ ನಿರ್ಮಾಣ ಕಾಮಗಾರಿಯಲ್ಲಿ ಸರ್ಕಾರದ ಹಣ ದುರುಪಯೋಗ, ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕಾನೂನು ಬಾಹಿರ ಹಣ ಪಾವತಿ ಹಾಗೂ ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡದೆ ಯಂತ್ರದ ಬಳಕೆ ಮಾಡಿ ಹಣ ದುರುಪಯೋಗ ಮಾಡಿರುವ ಮತ್ತು ಇದೇ ಯೋಜನೆಯಡಿಯಲ್ಲಿ ಹೆಚ್ಚುವರಿ ಹಣ ಕಾನೂನು ಬಾಹಿರವಾಗಿ ಪಾವತಿ ಮಾಡಿರುವ ಆರೋಪಗಳನ್ನು ಎದುರಿಸುತ್ತಿದ್ದು, ಇದಕ್ಕೆ ಸಂಬಂಧಿಸಿದಂತೆ ಶಿಸ್ತು ಕ್ರಮ ಜರುಗಿಸಲು ದಿನಾಂಕ: 31-05-2014 ರಂದು ದೋಷಾರೋಪಣಾ ಪಟ್ಟಿ ಜಾರಿ ಮಾಡಲಾಗಿದೆ.

ಮುಂದುವರೆದು, ಕೆಲವು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ಮತ್ತು ತಾಲ್ಲೂಕು ಪಂಚಾಯತಿ ಸಿಬ್ಬಂದಿಗಳು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರನ್ನು ಖುದ್ದಾಗಿ ದಿನಾಂಕ: 12-06-2014 ರಂದು ಭೇಟಿಯಾಗಿ ಶ್ರೀ ವಸಂತಕುಮಾರ್ ರವರು ಹಣಕ್ಕಾಗಿ ತಮಗೆ ವಿವಿಧ ರೀತಿಯಲ್ಲಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ, ಹಣ ನೀಡದ ನೌಕರರಿಗೆ ಕರೆ ಮಾಡಿ ಹಣ ನೀಡದಿದ್ದಲ್ಲಿ ಮೇಲಾಧಿಕಾರಿಗಳಿಗೆ ಶಿಸ್ತು ಕ್ರಮಕ್ಕಾಗಿ ಕಳುಹಿಸುವುದಾಗಿ ಬೆದರಿಸುವುದು, ತಮ್ಮ ದೂರವಾಣಿಗೆ ರೂ.5000/- ಕರೆನ್ಸಿ ಕಳುಹಿಸುವಂತೆ ಕೇಳುವುದು, ಸ್ವಂತ ಕೆಲಸಕ್ಕಾಗಿ ಟ್ಯಾಕ್ಸಿಯನ್ನು ಕಳುಹಿಸುವಂತೆ ಹೇಳುವುದು, ರಾತ್ರಿ 11.00 ಗಂಟೆಯ ನಂತರ ಮಹಿಳಾ ನೌಕರರಿಗೆ ಕರೆ ಮಾಡಿ ಅಸಭ್ಯ ರೀತಿಯಲ್ಲಿ ಮಾತನಾಡುವುದು ಹಾಗೂ ಚುನಾವಣಾ ವೆಚ್ಚವೆಂದು, ಗ್ರಾಮ ಪಂಚಾಯತಿ ನೌಕರರಿಂದ ಹಣ ವಸೂಲು ಮಾಡುವುದು ಈ ರೀತಿ

ತೀವ್ರತರವಾದ ಆರೋಪಗಳನ್ನು ಮಾಡಿರುತ್ತಾರೆ, ಹಾಗೂ ಈ ಬಗ್ಗೆ ಮೇಲೆ ಓದಲಾದ (3) ರ ಮನವಿಯನ್ನು ಸಲ್ಲಿಸಿದ್ದಾರೆ.

ಮೇಲ್ಕಂಡ ಎಲ್ಲಾ ವರದಿ/ ಆರೋಪಗಳ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಯವರು ಮೇಲ್ಕಂಡ ಎರಡು ಪ್ರಕರಣಗಳಲ್ಲಿನ ದಾಖಲೆಗಳಲ್ಲಿ ಹಸ್ತಕ್ಷೇಪ ಮಾಡುವ ಸಾಧ್ಯತೆಗಳಿರುವುದರಿಂದ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 230 ವಿಸೇಬಿ 2013 ಬೆಂಗಳೂರು ದಿನಾಂಕ:25-06-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10 (1)(ಡಿ)ರಡಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ಬಿ. ಸಿ. ವಸಂತಕುಮಾರ್, ಕಾರ್ಯನಿರ್ವಾಹಕ ಅಧಿಕಾರಿ. ತಾಲ್ಲೂಕು ಪಂಚಾಯತಿ. ಚಿಂತಾಮಣಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರನ್ನು ಅವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಯು ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಾಗಿರುತ್ತಾರೆ.

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,

1.ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2.ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಬೆಂಗಳೂರು.
3.ಆಯುಕ್ತರು,-ಗ್ರಾಮೀಣಾಭಿವೃದ್ಧಿ, ಆಯುಕ್ತಾಲಯ, ಬೆಂಗಳೂರು.
4.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿಕ್ಕಬಳ್ಳಾಪುರ.
5.ಸರ್ಕಾರದ ಅಧೀನ ಕಾರ್ಯದರ್ಶಿ, (ಸಮಿತಿಗಳು), ಶಿಕ್ಷಣ ಇಲಾಖೆ, ಬೆಂಗಳೂರು.
5.ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಇವರ ಮೂಲಕ)

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ. ವಿಧಾನ ಸೌಧ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ(ಪಂ. ರಾಜ್)/ಅಪರ ಕಾರ್ಯದರ್ಶಿ(ಆಡಳಿತ) ಗ್ರಾಮೀಣಾಭಿವೃದ್ಧಿ, ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
3. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GOs